19.02.2024

# ಕರ್ನಾಟಕ ಸರ್ಕಾರ

## ಆಯುಕ್ತರ ಕಛೇರಿ, ಶಾಲಾ ಶಿಕ್ಷಣ ಇಲಾಖೆ, ನೃಪತುಂಗರಸ್ತೆ, ಬೆಂಗಳೂರು-560001.

ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ **ಶ್ರೀ ಸೂರಜ್ ರೇವಣ್ಣ(ಸ್ಥಳೀಯ ಸಂಸ್ಥೆಗಳಿಂದ ಆಯ್ಕೆಯಾದವರು)**ರವರ ಪ್ರಶ್ನೆ ಸಂಖ್ಯೆ **477(457)** ಕ್ಕೆ ಉತ್ತರ ನೀಡುತ್ತಿರುವ ಬಗ್ಗೆ.

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ರಾಜ್ಯದಲ್ಲಿ ಪ್ರಾಥಮಿಕ, ಪ್ರೌಢ ಹಾಗೂ ಪದವಿ ಪೂರ್ವ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ದೈಹಿಕ ಶಿಕ್ಷಣ ಶಿಕ್ಷಕರ ಸಂಖ್ಯೆ ಹಾಗೂ ಖಾಲಿ ಇರುವ ದೈಹಿಕ ಶಿಕ್ಷಣ ಶಿಕ್ಷಕರ ಸಂಖ್ಯೆ ಎಷ್ಟು; (ವಿವರ ನೀಡುವುದು) | **ಸರ್ಕಾರಿ ಪ್ರಾಥಮಿಕ ಶಾಲೆ :**<br>1.ರಾಜ್ಯದಲ್ಲಿ ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ದೈಹಿಕ ಶಿಕ್ಷಣ ಶಿಕ್ಷಕರ ಸಂಖ್ಯೆ: **4029**<br>2.ರಾಜ್ಯದಲ್ಲಿ ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ಖಾಲಿ ಇರುವ ದೈಹಿಕ ಶಿಕ್ಷಣ ಶಿಕ್ಷಕರ ಸಂಖ್ಯೆ: **2743**<br>**ಸರ್ಕಾರಿ ಪ್ರೌಢಶಾಲೆ:-**<br>1. ರಾಜ್ಯದಲ್ಲಿ ಸರ್ಕಾರಿ ಪ್ರೌಢಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ದೈಹಿಕ ಶಿಕ್ಷಣ ಶಿಕ್ಷಕರ ಸಂಖ್ಯೆ: **3568**<br>2. ರಾಜ್ಯದಲ್ಲಿ ಸರ್ಕಾರಿ ಪ್ರೌಢಶಾಲೆಗಳಲ್ಲಿ ಖಾಲಿ ಇರುವ ದೈಹಿಕ ಶಿಕ್ಷಣ ಶಿಕ್ಷಕರ ಸಂಖ್ಯೆ: **1642** |
| (ಆ) | ರಾಜ್ಯದಲ್ಲಿ ದೈಹಿಕ ಶಿಕ್ಷಣ ಶಿಕ್ಷಕರನ್ನು ಪ್ರಾಥಮಿಕ, ಪ್ರೌಢ ಹಾಗೂ ಪದವಿ ಪೂರ್ವ ಕಾಲೇಜುಗಳಲ್ಲಿ ನೇಮಕ ಮಾಡಲು ಮತ್ತು ಮುಂಬಡ್ತಿ ನೀಡಲು ಇರುವ ಇಲಾಖೆಯ ರೀತಿ-ನೀತಿಗಳೇನು; (ವಿವರ ನೀಡುವುದು) | ಸರ್ಕಾರಿ ಪ್ರಾಥಮಿಕ ಶಾಲೆ ಮತ್ತು ಸರ್ಕಾರಿ ಪ್ರೌಢಶಾಲೆಗಳ ನೇಮಕಾತಿ ಹಾಗೂ ಮುಂಬಡ್ತಿ ನೀಡಲು ಶಾಲಾ ಶಿಕ್ಷಣ ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮದಂತೆ ಕ್ರಮವಹಿಸಲಾಗುತ್ತಿದೆ. (ವೃಂದ ಮತ್ತು ನೇಮಕಾತಿ ನಿಯಮದ ಪ್ರತಿ ಲಗತ್ತಿಸಿದೆ) |
| (ಇ) | ಇಲಾಖೆಯಲ್ಲಿ ಖಾಲಿ ಇರುವ ದೈಹಿಕ ಶಿಕ್ಷಕರ ಹುದ್ದೆಗೆ ಮುಂಬಡ್ತಿ ನೀಡುವಲ್ಲಿ ಮತ್ತು ನೇಮಕಾತಿ ಮಾಡುವಲ್ಲಿ ಸರ್ಕಾರ ತುರ್ತಾಗಿ ಕ್ರಮ ವಹಿಸುವುದೇ? (ವಿವರ ನೀಡುವುದು) | ಹೌದು,<br>ಶಾಲಾ ಶಿಕ್ಷಣ ಇಲಾಖೆಯಲ್ಲಿ ಸರ್ಕಾರಿ ಪ್ರಾಥಮಿಕ ಶಾಲೆ ಮತ್ತು ಪ್ರೌಢಶಾಲೆಗಳಲ್ಲಿ ದೈಹಿಕ ಶಿಕ್ಷಕರ ಹುದ್ದೆಗೆ ಮುಂಬಡ್ತಿ ನೀಡುವಲ್ಲಿ ಹಾಗೂ ನೇಮಕಾತಿ ಮಾಡುವಲ್ಲಿ ಈ ಕೆಳಕಂಡಂತೆ ಕ್ರಮವಹಿಸಲಾಗಿದೆ.<br><br>1. ವೃಂದ ಮತ್ತು ನೇಮಕಾತಿ ನಿಯಮದಂತೆ ಅರ್ಹರಾದ ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಬಿ.ಪಿ.ಇಡಿ ತರಬೇತಿ ಪಡೆದ ದೈಹಿಕ ಶಿಕ್ಷಣ ಶಿಕ್ಷಕರಿಗೆ, ಸರ್ಕಾರಿ ಪ್ರೌಢ ಶಾಲಾ ದೈಹಿಕ ಶಿಕ್ಷಣ ಶಿಕ್ಷಕರು ಗ್ರೇಡ್-1 ಹುದ್ದೆಗೆ ಬಡ್ತಿ ನೀಡಲು ಕ್ರಮವಹಿಸಲು ರಾಜ್ಯ ಎಲ್ಲಾ ಉಪನಿರ್ದೇಶಕರುಗಳಿಗೆ ಈ ಕಛೇರಿ ಪತ್ರ ದಿನಾಂಕ:10.10.2023 ರಂದು ಸೂಚಿಸಲಾಗಿರುತ್ತದೆ. ಹಾಗೂ ಬಡ್ತಿ ಪ್ರಕ್ರಿಯೆ ಪ್ರಗತಿಯಲ್ಲಿರುತ್ತದೆ. |

Scanned with OKEN Scanner

2. ಸರ್ಕಾರಿ ಪ್ರೌಢ ಶಾಲೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ದೈಹಿಕ ಶಿಕ್ಷಣ ಶಿಕ್ಷಕರಿಗೆ ಗ್ರೇಡ್-1 ವೃಂದದಿಂದ ಗ್ರೂಪ್-ಬಿ ವೃಂದದ ದೈಹಿಕ ಶಿಕ್ಷಣ ಪರಿವೀಕ್ಷಕರ ವೃಂದದ ಹುದ್ದೆಗಳಿಗ ಸ್ಥಾನಪನ್ನ ಬಡ್ತಿಯನ್ನು ದಿನಾಂಕ:29.12.2023 ರಂದು ನೀಡಲಾಗಿರುತ್ತದೆ.

3. ಶಾಲಾ ಶಿಕ್ಷಣ ಇಲಾಖೆಯ ದೈಹಿಕ ಶಿಕ್ಷಣ ಉಪನ್ಯಾಸಕರ ಹುದ್ದೆಗಳಿಗೆ ಮುಂಬಡ್ತಿ ಮೂಲಕ ಭರ್ತಿ ಮಾಡುವ ಸಲುವಾಗಿ ಪ್ರಸ್ತುತ ಜೇಷ್ಠತಾ ಪಟ್ಟಿಯನ್ವಯ ಒಟ್ಟು 10 ಖಾಲಿ ಹುದ್ದೆಗಳಿಗೆ ಒಟ್ಟು 30 ಜನ ಅರ್ಹ ಗ್ರೇಡ್-1 ದೈಹಿಕ ಶಿಕ್ಷಣ ಶಿಕ್ಷಕರಿಂದ ಬಡ್ತಿ ಪ್ರಸ್ತಾವನೆಯನ್ನು ಪಡೆಯಲು ಈ ಕಛೇರಿ ಹಂತದಲ್ಲಿ ಕ್ರಮವಹಿಸಲಾಗುತ್ತಿದೆ.

4 . ರಾಜ್ಯದ ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ಖಾಲಿ ಇರುವ ದೈಹಿಕ ಶಿಕ್ಷಣ ಶಿಕ್ಷಕರ 2120 ಹುದ್ದೆಗಳನ್ನು ಭರ್ತಿ ಮಾಡಲು ಅನುಮತಿ ಕೋರಿ ಈ ಕಛೇರಿ ಪತ್ರ ದಿನಾಂಕ:01.12.2021 ರಲ್ಲಿ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿದ್ದು ಆದೇಶ ನಿರೀಕ್ಷಿಸಲಾಗಿದೆ..

5. ಸರ್ಕಾರದ ಆದೇಶ ಸಂಖ್ಯೆ" ಇಪಿ 14 ಎಲ್‌ಬಿಪಿ 2022 ದಿನಾಂಕ: 13.09.2022 ರ ಪತ್ರದಲ್ಲಿ ರಾಜ್ಯದ ಸರ್ಕಾರಿ ಪ್ರೌಢಶಾಲೆಗಳಲ್ಲಿ ಖಾಲಿಯಿರುವ ವಿವಿಧ ವೃಂದದ ದೈಹಿಕ ಶಿಕ್ಷಣ ಶಿಕ್ಷಕರ 200 ಹುದ್ದೆಗಳು ಸೇರಿ ಒಟ್ಟು 2500 ಶಿಕ್ಷಕರುಗಳ ಹುದ್ದೆಗಳನ್ನು ಅನುಮತಿ ನೀಡಿರುವ 15000 ಪದವೀಧರ ಪ್ರಾಥಮಿಕ ಶಾಲಾ ಶಿಕ್ಷಕರ ನೇಮಕಾತಿಯಲ್ಲಿ ಭರ್ತಿಯಾಗದೇ ಖಾಲಿ ಉಳಿದ ಹುದ್ದೆಗಳಿಗೆ ಹೊಂದಾಣಿಕೆ ಮಾಡಿಕೊಳ್ಳುವ ಷರತ್ತಿಗೊಳಪಟ್ಟು ನೇರನೇಮಕಾತಿ ಮೂಲಕ ಭರ್ತಿ ಮಾಡಲು ಸರ್ಕಾರ ಅನುಮತಿ ನೀಡಿರುತ್ತದೆ. ಆದರೆ 15000 ಪದವೀಧರ ಪ್ರಾಥಮಿಕ ಶಾಲಾ ಶಿಕ್ಷಕರ ನೇಮಕಾತಿಯಲ್ಲಿ ಒಟ್ಟು 13352 ಹುದ್ದೆಗಳ ಆಯ್ಕೆಪಟ್ಟಿಯನ್ನು ಪ್ರಕಟಿಸಲಾಗಿರುತ್ತದೆ. ಪ್ರಯುಕ್ತ ಸದರಿ 15000 ಹುದ್ದೆಗಳಲ್ಲಿ ಪ್ರೌಢಶಾಲಾ ಶಿಕ್ಷಕರ ನೇಮಕಾತಿಗೆ ಒಟ್ಟು 1648 ಹುದ್ದೆಗಳು ಮಾತ್ರ ಉಳಿದಿರುತ್ತವೆ. ಪ್ರಯುಕ್ತ ಪ್ರಸ್ತುತ ಸಾಲಿನಲ್ಲಿ ಒಟ್ಟು 2500 ಹುದ್ದೆಗಳನ್ನು ಭರ್ತಿ ಮಾಡುವ ಕುರಿತು ಸರ್ಕಾರದ ಅನುಮತಿ ಕೋರಿ ಈ ಕಛೇರಿ ಕಡತ ಸಂಖ್ಯೆ:1005454 ರಲ್ಲಿಇ-ಕಡತವನ್ನು ಸರ್ಕಾರಕ್ಕೆ ಸಲ್ಲಿಸಲಾಗಿದೆ. ಪ್ರಯುಕ್ತ ಸರ್ಕಾರವು ಅನುಮತಿಸಿದ ಕೂಡಲೇ ಸರ್ಕಾರಿ ಪ್ರೌಢಶಾಲಾ ಶಿಕ್ಷಕರ ನೇಮಕಾತಿ ಪ್ರಕ್ರಿಯೆಗೆ ಕ್ರಮವಹಿಸಲಾಗುವುದು.

ನಿರ್ದೇಶಕರ ಪರವಾಗಿ (ಮೈನಾರಿಟಿ)

Scanned with OKEN Scanner